ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 17-03-2017

# <u>ಪತ್ರಿಕಾ ಆಮಂತ್ರಣ</u>

1. **<u>Felicitation Function:</u>**

**<u>Inauguration:</u>**

**Dr. G. Parameshwara, Home Minister,**

**<u>Chief Guest:</u>**

**N.H. Shivashankar Reddy, Deputy Speaker of Karnatak Legislative Assembly**

**Dated: 18-03-2017, Saturday Time : 4.00 PM**

**Place: Alumni Association, University of Agricultural Sciences, Hebbal Campus, Hebbal, Bengaluru - 560 024.**

2. <u>ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮ:</u>

<u>ತಿಂಗಳ ಅತಿಥಿಯಾಗಿ:</u>

**ಗರುಡನಗಿರಿ ನಾಗರಾಜ,**

**ಹಿರಿಯ ಪತ್ರಕರ್ತರು**

**ದಿನಾಂಕ: 18–03–2017, ಶನಿವಾರ, ಸಂಜೆ 4–00 ಗಂಟೆಗೆ**

**ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.**

**ವಿಧಾನ ಪರಿಷತ್ತಿನಲ್ಲಿಂದು:**

## ಕಾಲೇಜು ಅತಿಥಿ ಉಪನ್ಯಾಸಕರ ಗೌರವಧನ ಹೆಚ್ಚಳಕ್ಕೆ ಸರ್ಕಾರದ ಗಂಭೀರ ಚಿಂತನೆ

**ಬೆಂಗಳೂರು, ಮಾರ್ಚ್ 17 , (ಕರ್ನಾಟಕ ವಾರ್ತೆ)**

ರಾಜ್ಯದ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಗೌರವಧನವನ್ನು ಹೆಚ್ಚಿಸುವ ಕುರಿತು ಸರ್ಕಾರ ಗಂಭೀರ ಚಿಂತನೆ ನಡೆಸಲಿದೆ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಕಲಾಪದಲ್ಲಿ ಸದಸ್ಯ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ ಅವರ ಪ್ರಶ್ನೆಗೆ ಉತ್ತರಿಸಿ ಮಾತನಾಡಿದ ಸಚಿವರು ಯು.ಜಿ.ಸಿ. ಪ್ರಕಾರ ಪ್ರತಿ ಗಂಟೆಗೆ 1000 ರೂ. ಗೌರವಧನವನ್ನು ಅತಿಥಿ ಉಪನ್ಯಾಸಕರಿಗೆ ನೀಡುತ್ತಿದ್ದು, ಇದರ ಪ್ರಕಾರ ರಾಜ್ಯದಲ್ಲಿನ ಅತಿಥಿ ಉಪನ್ಯಾಸಕರ ಗೌರವಧನವನ್ನು ಹೆಚ್ಚಿಸುವ ಕುರಿತು ಸರ್ಕಾರ ಪರಿಶೀಲಿಸಲಿದೆ ಹಾಗೂ ಈಗಾಗಲೇ ನೀಡುತ್ತಿರುವ ಗೌರವಧನ ಉತ್ತಮವಾಗಿದೆ.

2016–17 ನೇ ಸಾಲಿನಲ್ಲಿ ಸರ್ಕಾರವು ಖಜಾನೆ – 2 ಅನುಷ್ಠಾನಗೊಳಿಸಿದ್ದು ಇದರನ್ವಯ ಕೆಲವು ತಾಂತ್ರಿಕ ತೊಂದರೆಗಳಿಂದಾಗಿ ಪ್ರಸಕ್ತ ವರ್ಷದ ಅತಿಥಿ ಉಪನ್ಯಾಸಕರ ಗೌರವಧನ ಪಾವತಿಸುವಲ್ಲಿ ವಿಳಂಬವಾಗುತ್ತಿದೆ. ಸಂಬಂಧಪಟ್ಟ ಅತಿಥಿ ಉಪನ್ಯಾಸಕರುಗಳಿಗೆ ತಕ್ಷಣವೇ ಸಂಭಾವನೆ ಪಾವತಿಗೆ ಕ್ರಮವಹಿಸುವ ಬಗ್ಗೆ ಖಚಿತಪಡಿಸಿಕೊಳ್ಳಲು ಹಾಗೂ ಈ ಕುರಿತು ಮೇಲ್ವಿಚಾರಣೆ ಮಾಡುವಂತೆ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಎಂಆರ್‌ಎಂ;ಜೆಡಿ:ಜಿಪಿಆರ್.

# ಪಿ.ಡಿ.ಓ. ಹುದ್ದೆಯನ್ನು ಗ್ರೂಪ್ ಬಿ ಗೆಜೆಟೆಡ್ ಹುದ್ದೆಗೆ ಉನ್ನತೀಕರಣ – ಸರ್ಕಾರದ ಪರಿಶೀಲನೆಯಲ್ಲಿದೆ

**ಬೆಂಗಳೂರು, ಮಾರ್ಚ್ 17 , (ಕರ್ನಾಟಕ ವಾರ್ತೆ)**

ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿ.ಡಿ.ಓ) ಹುದ್ದೆಯನ್ನು ಗ್ರೂಪ್ ಬಿ ಗೆಜೆಟೆಡ್ ಹುದ್ದೆಗೆ ಉನ್ನತೀಕರಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್.ಕೆ. ಪಾಟೀಲ್ ಅವರು ತಿಳಿಸಿದರು.

ಎಂ.ಕೆ. ಪ್ರಾಣೇಶ್ ಅವರು ಕೇಳಿದ ಪ್ರಶ್ನೆಗೆ ಉತ್ತರ ನೀಡಿ ಮಾತನಾಡಿದ ಸಚಿವರು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್ "ಬಿ" ವೃಂದದ ಹುದ್ದೆಯನ್ನಾಗಿ ಮೇಲ್ದರ್ಜೆಗೇರಿಸಲು ಆರ್ಥಿಕ ಇಲಾಖೆ ಮತ್ತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಅಭಿಪ್ರಾಯ ಕೋರಲಾಗಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಈ ಬಗ್ಗೆ ಆರ್ಥಿಕ ಇಲಾಖೆಯ ಅಭಿಪ್ರಾಯ ಪಡೆಯುವಂತೆ ತಿಳಿಸಿರುತ್ತದೆ. ಆರ್ಥಿಕ ಇಲಾಖೆ ಅನುಮೋದನೆ ದೊರೆತ ನಂತರ ಮುಂದಿನ ಅಗತ್ಯ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಎಂಆರ್‌ಎಂ:ಜೆಡಿ:ಜಿಪಿಆರ್.

# <u>ಹಳ್ಳಿ ಸಂತೆ ಸಮಿತಿ ರಚನೆಗೆ ಚಿಂತನೆ</u>

**ಬೆಂಗಳೂರು, ಮಾರ್ಚ್ 17 , (ಕರ್ನಾಟಕ ವಾರ್ತೆ)**

ರಾಜ್ಯದ ಆಯ್ದ 45 ಗ್ರಾಮ ಪಂಚಾಯಿತಿಗಳಲ್ಲಿ ಆರಂಭಿಸಿರುವ "ಹಳ್ಳಿ ಸಂತೆ" ಯೋಜನೆ ಸಫಲತೆಗಾಗಿ ಹಾಗೂ ನಿರ್ವಹಣೆಗಾಗಿ ಸ್ಥಳೀಯ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್, ಸದಸ್ಯರುಗಳನ್ನೊಳಗೊಂಡ ಸಮಿತಿಯನ್ನು

ರಚಿಸಲು ಚಿಂತಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್. ಕೆ. ಪಾಟೀಲ್ ಅವರು ಸದನದಲ್ಲಿ ಹೇಳಿದರು.

ರಾಜ್ಯ ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆ "ಹಳ್ಳಿ ಸಂತೆ" ಕೇವಲ ಸರ್ಕಾರಿ ಯೋಜನೆಯಾಗಿ ಉಳಿಯದೆ ಜನಸಾಮಾನ್ಯರ ಯೋಜನೆಯಾಗಿ ರೂಪುಗೊಳ್ಳಲು ಸರ್ಕಾರ ಸ್ಥಳೀಯ ಜನಪ್ರತಿನಿಧಿಗಳನ್ನೊಳಗೊಂಡ ಸಮಿತಿಯನ್ನು ರಚಿಸಿ ನಿರ್ವಹಣೆಗಾಗಿ ಮೇಲುಸ್ತುವಾರಿಯನ್ನು ವಹಿಸಬೇಕು ಎಂದು ಸಲಹೆ ನೀಡಿದ ಸದಸ್ಯ ಭಾನುಪ್ರಕಾಶ್ ಅವರ ಸಲಹೆಯನ್ನು ಮನ್ನಿಸಿ ಮಾತನಾಡಿದ ಸಚಿವರು "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆ ಕಟ್ಟಡ ಹಾಗೂ ಪ್ರಾಂಗಣವನ್ನು ನಿರ್ಮಿಸಲು 2016-17 ನೇ ಸಾಲಿನಲ್ಲಿ 12.20 ಕೋಟಿ ರೂ. ಅನುದಾನವನ್ನು ಒದಗಿಸಲಾಗಿದೆ ಎಂದರು.

ಆಯ್ದ ಗ್ರಾಮ ಪಂಚಾಯತ್‌ಗಳನ್ನು ಅವುಗಳ ಗಾತ್ರದ ಅನುಸಾರವಾಗಿ ಎ ಮತ್ತು ಬಿ ಗ್ರೇಡ್ ಎಂದು ವಿಂಗಡಿಸಿ ಅನುದಾನ ನೀಡಲು ತೀರ್ಮಾನಿಸಲಾಗಿದ್ದು, ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಹಾಲಿ ಸಂತೆ ನಡೆಯುತ್ತಿರಬೇಕು, ನಿವೇಶನ ಲಭ್ಯವಿರಬೇಕು. ಸಂಚಾರಕ್ಕೆ ಅಡಚಣೆಯಾಗದ ಕಡೆ ಸಂತೆಯನ್ನು ನಿರ್ಮಿಸಲು ಸರ್ಕಾರ ಯೋಜನೆ ರೂಪಿಸಿದೆ ಎಂದು ತಿಳಿಸಿದರು.

ಎಂಆರ್‌ಎಂ:ಜೆಡಿ:ಜಿಪಿಆರ್.

# ನಿಯಮ ಪಾಲಿಸದ ಶಾಲೆಗಳ ವಿರುದ್ಧ ಕಠಿಣ ಕ್ರಮ

**ಬೆಂಗಳೂರು, ಮಾರ್ಚ್ 17 , (ಕರ್ನಾಟಕ ವಾರ್ತೆ)**

ಕರ್ನಾಟಕ ಶಿಕ್ಷಣ ಕಾಯ್ದೆ 1983 ಸೆಕ್ಷನ್ 123 ರ ಪ್ರಕಾರ ನಿಯಮ ಪಾಲಿಸದ ಶಾಲೆಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಔಕಾಫ್ ಸಚಿವ ತನ್ವೀರ್ ಸೇಠ್ ಅವರು ತಿಳಿಸಿದರು.

ಸರ್ಕಾರದ 2016 ರ ಸುತ್ತೋಲೆ ಪ್ರಕಾರ ಶಾಲೆಗಳನ್ನು ಆರಂಭಿಸಲು ಅರ್ಹ ಆಡಳಿತ ಮಂಡಳಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಅನುಮತಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಇಂತಹ ಶಾಲೆಗಳ ವಿರುದ್ಧ ಯಾವುದೇ ದೂರುಗಳು ಬಂದಲ್ಲಿ ಇಲಾಖೆಯ ಅಧಿಕಾರಿಗಳಿಂದ ತನಿಖೆ ನಡೆಸಿ ದೂರಿನ ಸತ್ಯಾಸತ್ಯತೆಯ ಬಗ್ಗೆ ಖಾತರಿಪಡಿಸಿಕೊಂಡು ಕರ್ನಾಟಕ ಶಿಕ್ಷಣ ಕಾಯ್ದೆಯ ನಿಯಮಗಳನ್ವಯ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಎಂಆರ್‌ಎಂ;ಜೆಡಿ:ಜಿಪಿಆರ್.

## ಗ್ರಾಮ ಪಂಚಾಯತಿ ತ್ಯಾಜ್ಯ ವಿಲೇವಾರಿಗೆ ಕ್ರಮ

**ಬೆಂಗಳೂರು, ಮಾರ್ಚ್ 17 , (ಕರ್ನಾಟಕ ವಾರ್ತೆ)**

ಗ್ರಾಮ ಪಂಚಾಯತಿಗಳ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ತ್ಯಾಜ್ಯ ವಿಲೇವಾರಿಗಾಗಿ ಸೂಕ್ತ ಸ್ಥಳವನ್ನು ಗುರುತಿಸಿ ಹಂತ ಹಂತವಾಗಿ ಕಡ್ಡಾಯವಾಗಿ ಘಟಕಗಳನ್ನು ನಿರ್ಮಿಸಲು ಹಾಗೂ ಅವಶ್ಯವಿದ್ದಲ್ಲಿ ಬಹು ಗ್ರಾಮ ಆಧಾರಿತ ಘನತ್ಯಾಜ್ಯ ನಿರ್ವಹಣಾ ಘಟಕಗಳನ್ನು ಅನುಷ್ಠಾನ ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್.ಕೆ. ಪಾಟೀಲ್ ಹೇಳಿದರು.

ಗ್ರಾಮ ಪಂಚಾಯತಿಗಳ ಮಟ್ಟದಲ್ಲಿ ತ್ಯಾಜ್ಯವನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಲು ಸಾರ್ವಜನಿಕರಿಗೆ ಅರಿವು ಮೂಡಿಸಲು ಮಾಹಿತಿ ಶಿಕ್ಷಣ ಮತ್ತು ಸಂಹವನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ರಾಜ್ಯದಲ್ಲಿ 6,022 ಗ್ರಾಮ ಪಂಚಾಯಿತಿಗಳ ಪೈಕಿ 2013-14 ರಿಂದ ಫೆಬ್ರವರಿ 2017 ರ ಅಂತ್ಯಕ್ಕೆ ಒಟ್ಟು 405 ಗ್ರಾಮ ಪಂಚಾಯಿತಿಗಳಲ್ಲಿ ಘನ ಮತ್ತು ದ್ರವ್ಯ ತ್ಯಾಜ್ಯ ನಿರ್ವಹಣೆಗೆ ಅನುಮೋದನೆ ನೀಡಲಾಗಿದ್ದು ಇದುರವರೆಗೆ 63 ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ಎಂದು ತಿಳಿಸಿದರು.

ಜೆಡಿ:ಜಿಪಿಆರ್.

## ವಾಡಿ ಪುರಸಭೆ – ಚುನಾವಣಾ ವೇಳಾಪಟ್ಟಿ ಪ್ರಕಟ

**ಬೆಂಗಳೂರು, ಮಾರ್ಚ್ 17 , (ಕರ್ನಾಟಕ ವಾರ್ತೆ)**

ನಗರ ಸ್ಥಳೀಯ ಸಂಸ್ಥೆಯಾದ ವಾಡಿ ಪುರಸಭೆಗೆ ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ರಾಜ್ಯ ಚುನಾವಣಾ ಆಯೋಗವು ಕರ್ನಾಟಕ ಮುನ್ಸಿಪಾಲಿಟಿ (ಕೌನ್ಸಿಲರ್‌ಗಳ ಚುನಾವಣೆ) ನಿಯಮಗಳು 1997 ನಿಯಮಗಳನ್ವಯ ಈ ಕೆಳಕಂಡಂತೆ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ.

ಮಾರ್ಚ್ 20, 2017 ಚುನಾವಣೆ ಅಧಿಸೂಚನೆ ಹೊರಡಿಸಲಾಗುವುದು. ಮಾ. 27, ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕ, ಮಾ. 28 ನಾಮಪತ್ರ ಪರಿಶೀಲಿಸುವ ದಿನ,

ಮಾ. 30 ಉಮೇದುವಾರಿಕೆ ಹಿಂತೆಗೆದುಕೊಳ್ಳಲು ಕೊನೆಯ ದಿನ, ಏಪ್ರಿಲ್ 7, 2017 ಮತದಾನ ನಡೆಯುವ ದಿನವಾಗಿದ್ದು ಬೆಳ್ಳಿಗೆ 7.00 ರಿಂದ ಸಂಜೆ 5.00 ಗಂಟೆಯವರೆಗೆ ಮತದಾನ ನಡೆಯಲಿದೆ, ಏ. 8 ಮರು ಮತದಾನ ಅವಶ್ಯವಿದ್ದಲ್ಲಿ ಮರು ಮತದಾನ ನಡೆಯಲಿದೆ. ಏ 9 ಮತ ಎಣಿಕೆ ಬೆಳಿಗ್ಗೆ 8.00 ಗಂಟೆಯಿಂದ (ತಾಲ್ಲೂಕು ಕೇಂದ್ರಗಳಲ್ಲಿ) ನಡೆಯಲಿದೆ

ಸದಾಚಾರ ಸಂಹಿತೆಯು ಮಾರ್ಚ್ 20, 2017 ರಿಂದ ಜಾರಿಗೆ ಬರಲಿದ್ದು, ಚುನಾವಣಾ ಪ್ರಕ್ರಿಯೆ ಮುಕ್ತಾಯಗೊಳ್ಳುವವರೆಗೆ ಅಂದೆ ಏಪ್ರಿಲ್ 9, 2017 ರವರೆಗೆ ಚುನಾವಣೆ ನಡೆಯುವ ವಾಡಿ ಪುರಸಭೆಯ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ ಎಂದು ರಾಜ್ಯ ಚುನಾವಣಾ ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ.

ಎಂಆರ್ಎಂ::ಜಿಪಿಆರ್.

## ಲೋಕಸೇವಾ ಆಯೋಗ – ಸದಸ್ಯರ ನೇಮಕ

**ಬೆಂಗಳೂರು, ಮಾರ್ಚ್ 17 , (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಖಾಲಿ ಇರುವ ಸದಸ್ಯರ ಸ್ಥಾನಕ್ಕೆ ಅಧಿಕಾರಿಗಳಾದ ಡಾ. ಚಂದ್ರಕಾಂತ್ ಡಿ, ಶಿವಕೇರಿ (ಡೀನ್, ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ) ಮತ್ತು ಎಸ್.ಹೆಚ್. ದುಗ್ಗಪ್ಪ (ಪೊಲೀಸ್ ಉಪ ಆಧೀಕ್ಷಕರು, ಹಿರಿಯೂರು ಉಪವಿಭಾಗ, ಹಿರಿಯೂರು, ಚಿತ್ರದುರ್ಗ ಜಿಲ್ಲೆ) ನೇಮಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ

ಎಂಆರ್ಎಂ::ಜಿಪಿಆರ್.

## ಹಳೆಯ ವಾಹನ ಹರಾಜು

**ಬೆಂಗಳೂರು, ಮಾರ್ಚ್ 17 , (ಕರ್ನಾಟಕ ವಾರ್ತೆ)**

ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರ ಕಚೇರಿಯ 1996ನೇ ಮಾಡೆಲ್ ಪೆಟ್ರೋಲ್ ವಾಹನ ಅಂಬಾಸಿಡರ್ ಕಾರ್ ಸಂಖ್ಯೆ : ಕೆಎ–01–ಜಿ–2381 ಇದನ್ನು ಟೆಂಡರ್ ಕಂ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

ಸ್ವೀಕರಿಸುವ ಕಡೆಯ ದಿನಾಂಕ: 20.03.2017, ಹರಾಜಿನ ದಿನಾಂಕ: 22–03–2017 ರಂದು ಬೆಳಿಗ್ಗೆ 11.30 ಗಂಟೆಗೆ, ವಾಹನ ಮೇಲ್ಕಂಡ ಕಚೇರಿಯ ಆವರಣದಲ್ಲಿದೆ. ಹೆಚ್ಚಿನ ವಿವರಗಳನ್ನು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರ ಕಚೇರಿಯವರಿಂದ

ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 26610610, 26610326 ರಲ್ಲಿ ಸಂಪರ್ಕಿಸಬಹುದು.

ಎಂಆರ್‌ಎಂ:ಜಿಪಿಆರ್

## ಮಾರ್ಚ್ 19 ರಂದು ಮೂಲ ಸಾಕ್ಷರತೆಯಡಿ ಕಲಿತವರ ಮೌಲ್ಯಮಾಪನ/ಪರೀಕ್ಷೆ

**ಬೆಂಗಳೂರು, ಮಾರ್ಚ್ 17 , (ಕರ್ನಾಟಕ ವಾರ್ತೆ)**

ರಾಷ್ಟ್ರಾದ್ಯಂತ ಕರ್ನಾಟಕವೂ ಸೇರಿದಂತೆ 25 ರಾಜ್ಯಗಳಲ್ಲಿ ನವಸಾಕ್ಷರರಿಗೆ ಪರೀಕ್ಷೆ ನಡೆಸಲಾಗುತ್ತಿದೆ

ಮಾರ್ಚ್ 19 ರಂದು ರಾಜ್ಯದ ಬಾಗಲಕೋಟೆ, ವಿಜಯಪುರ, ಬೆಂಗಳೂರು ಗ್ರಾಮಾಂತರ, ಬೆಳಗಾವಿ/ಚಿಕ್ಕೋಡಿ, ಬಳ್ಳಾರಿ, ಬೀದರ್, ಚಾಮರಾಜನಗರ, ಚಿತ್ರದುರ್ಗ, ಹಾವೇರಿ, ಗದಗ, ಕೋಲಾರ, ಕೊಪ್ಪಳ, ಮಂಡ್ಯ, ರಾಯಚೂರು, ತುಮಕೂರು/ಮಧುಗಿರಿ, ಕಲಬುರಗಿ, ಯಾದಗಿರಿ, ಮೈಸೂರು, ರಾಮನಗರ ಮತ್ತು ಚಿಕ್ಕಬಳ್ಳಾಪುರ – ಈ 20 ಜಿಲ್ಲೆಗಳ 3788 ಗ್ರಾಮ ಪಂಚಾಯಿತಿಗಳಲ್ಲಿ ಸಾಕ್ಷರ ಭಾರತ್ ಕಾರ್ಯಕ್ರಮ ಹಾಗೂ ಆಯ್ದೆ 22 ಗ್ರಾಮ ಪಂಚಾಯಿತಿಗಳಲ್ಲಿ ಸಂಸದರ ಆದರ್ಶ ಗ್ರಾಮ ಯೋಜನೆಯಡಿ ಕಲಿತವರಿಗೆ ಮೌಲ್ಯಮಾಪನಾ ಪರೀಕ್ಷೆ ನಡೆಯುತ್ತದೆ.

ಕರ್ನಾಟಕ ರಾಜ್ಯ ಸಾಕ್ಷರತಾ ಮಿಷನ್ ಪ್ರಾಧಿಕಾರವು ಜಿಲ್ಲಾ, ತಾಲ್ಲೂಕು, ಗ್ರಾಮ ಪಂಚಾಯಿತಿ ಲೋಕ ಶಿಕ್ಷಣ ಸಮಿತಿಗಳ ಮೂಲಕ ಈ ಪರೀಕ್ಷೆ ನಡೆಸಲಾಗುತ್ತಿದೆ.

ರಾಜ್ಯ ಈ ಬಾರಿ ಸುಮಾರು 17,01,400 ಜನ ನವಸಾಕ್ಷರರು ಈ ಪರೀಕ್ಷೆಗೆ ನೋಂದಾಯಿಸಿಕೊಳ್ಳುವವರಿದ್ದಾರೆ.

ಪ್ರಮುಖ ಉದ್ದೇಶ:

* ಮೂಲ ಸಾಕ್ಷರತೆಯಡಿ ಕಲಿಕೆಯ ಮಟ್ಟ ಅಳೆಯಲು

* ಕಲಿಕೆಯ ಮಟ್ಟದ ಸಾಧನೆಯನ್ನು ಪ್ರಮಾಣೀಕರಿಸುವುದರ ಮೂಲಕ ಗುರುತಿಸುವುದು.

ಆಯ್ದ ಗ್ರಾಮಗಳಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ನಡೆಸಲಾಗುತ್ತಿದೆ. ಮಾರ್ಚ್ 19 ರಂದು ಬೆಳಿಗ್ಗೆ 10.30 ರಿಂದ ಸಂಜೆ 5.00 ಗಂಟೆ ಅವಧಿಯೊಳಗೆ ಪರೀಕ್ಷಾರ್ಥಿಗಳು ತಮಗೆ ಅನುಕೂಲವಾದ 3 ಗಂಟೆಗಳ ಕಾಲ ಪರೀಕ್ಷೆಯ ಬರೆಯಬಹುದು.

ಪ್ರಶ್ನೆ ಪತ್ರಿಕೆ ಮೂರು ವಿಭಾಗಗಳಲಿದ್ದು ಓದು –50, ಬರಹ – 50 ಹಾಗೂ ಲೆಕ್ಕಾಚಾರ –50 ಅಂಕಗಳಾಗಿರುತ್ತದೆ.

ಶೇ 60 ಮತ್ತು ಹೆಚ್ಚಿನ ಅಂಕಗಳು – ಎ ದರ್ಜೆ, ಶೇ 40 ರಿಂದ 60 ಅಂಕಗಳು – ಬಿ ದರ್ಜೆ ಮತ್ತು ಶೇ 40 ಕ್ಕಿಂತ ಕಡಿಮೆ – ಸಿ ದರ್ಜೆಯಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಂಆರ್‌ಎಂ:ಜಿಪಿಆರ್